ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

2015ನೇ ಸಾಲಿನ ಗೆಜೆಟೆಡ್ ಪ್ರೊಬೆಷನರಿ ಅಭ್ಯರ್ಥಿಗಳ ಸಂದರ್ಶನದ ಬಗ್ಗೆ

ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-

767 (729) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2015ನೇ ಸಾಲಿನ ಗೆಜೆಟೆಡ್ ಪ್ರೊಬೆಷನರಿ ಪರೀಕ್ಷೆಗೆ ಅರ್ಜಿ ಹಾಕಿದ, ಪೂರ್ವ ಭಾವಿ ಪರೀಕ್ಷೆಗೆ ಹಾಜರಾದ, ಮುಖ್ಯ ಪರೀಕ್ಷೆಗೆ ಅರ್ಹರಾದ ಮುಖ್ಯ ಪರೀಕ್ಷೆಯಿಂದ ಸಂದರ್ಶನಕ್ಕೆ ಅರ್ಹರಾದ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; (ವರ್ಗವಾರು ವಿವರ ನೀಡುವುದು)

(ಆ) ಇವುಗಳ ಪೈಕಿ ಎಷ್ಟು ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ ;

(ಇ) ಇವುಗಳಲ್ಲಿ ವಿವಿಧ ವರ್ಗಗಳಿಗೆ ಮೀಸಲಿಟ್ಟ ಹುದ್ದೆಗಳ ಸಂಖ್ಯೆ ಎಷ್ಟು ; ಅಂದರೆ ಎಸ್.ಸಿ./ಎಸ್.ಟಿ, ಸಿ1, 2ಎ, 2ಬಿ, 3ಎ, 3ಬಿ, ಜಿ.ಎಂ. ಮತ್ತು ಆಯ್ಕೆ ಮಾಡಲಾದ ವಿವಿಧ ವರ್ಗಗಳ ಸಂಖ್ಯೆ ಎಷ್ಟು ; (ಎಲ್ಲಾ ವರ್ಗದ ವಿವರವಾದ ಮಾಹಿತಿ ನೀಡುವುದು)

(ಈ) ಇವುಗಳ ಪೈಕಿ ಮೀಸಲಾತಿ ಏನಾದರೂ ವಿಚಲಿತವಾಗಿದೆಯೇ?